- ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

- ಭಾರತ ಸಂವಿಧಾನ ಅನುಚ್ಛೇದ 371 ಜೆ ರೀತ್ಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಮಟ್ಟದ ಸ್ಥಳೀಯ ವೃಂದ ಕುರಿತಂತೆ ಅಧಿಸೂಚನೆ ಹೊರಡಿಸಲಾಗಿದೆ. ಈ ಹುದ್ದೆಗಳಿಗೆ ಸಂಬಂಧ ಪಟ್ಟ ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ಇಚ್ಛೆ ಪತ್ರವನ್ನು ಪಡೆದು, ತದನಂತರ ಖಾಲಿ ಹುದ್ದೆಗಳನ್ನು ಗುರುತಿಸಿ, ಅವುಗಳನ್ನು ಸ್ಥಳೀಯ ವೃಂದ ಮತ್ತು ಮೀಸಲಾತಿ ನಿಯಮಗಳನ್ವಯ ವರ್ಗೀಕರಿಸಿ, ತದನಂತರ ತಜ್ಞ ವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ದಂತ ಆರೋಗ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿ ವರ್ಗಗಳ ಹಲವು ವೃಂದಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹಾಗೂ ಇತರೆ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಮತ್ತು ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲು ಉದ್ದೇಶಿಸಲಾಗಿದೆ.

ವೈದ್ಯರು ಮತ್ತು ಸಿಬ್ಬಂದಿ ಕೊರತೆ

47(152); ಶ್ರೀ ಪುಟ್ಟಣ್ಣಯ್ಯ ಕೆ.ಎಸ್. (ಮೇಲುಕೋಟೆ)

ಅ) ರಾಜ್ಯದಲ್ಲಿ ಕೊರತೆ ಇರುವ ವೈದ್ಯರು ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ಹಾಗೂ ಕೊರತೆ ಇರುವ ವೈದ್ಯರು ಮತ್ತು ಸಿಬ್ಬಂದಿಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಆ) ಸಾಮಾನ್ಯ ಜನರ ಸಂಪೂರ್ಣ ಆರೋಗ್ಯ ರಕ್ಷಣೆ ಮಾಡಲು ಅನುಕೂಲವಾಗುವಂತೆ ರಾಜ್ಯದಾದ್ಯಂತ ಮೊಬೈಲ್ ಆಸ್ಪತ್ರೆಯನ್ನು ಪ್ರಾರಂಭ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ವಿವಿಧ ವೃಂದದ ಜಿಲ್ಲಾ ಮಟ್ಟದ ಕಾರ್ಯಕ್ರಮಾಧಿಕಾರಿಗಳಿಂದ ತಜ್ಞ ವೈದ್ಯರು, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ ಇತರೆ ವೈದ್ಯರು ಸೇರಿ 2,143 ಹುದ್ದೆಗಳು ಖಾಲಿ ಇವೆ ಹಾಗೂ 18,249 ಇತರೆ ವೃಂದದ ಸಿಬ್ಬಂದಿಗಳ ಹುದ್ದೆಗಳು ಖಾಲಿ ಇವೆ.

ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮದ ಬಗ್ಗೆ ಅನುಬಂಧದಲ್ಲಿ ನೀಡಲಾಗಿದೆ.

ಆ) ಕರ್ನಾಟಕ ಆರೋಗ್ಯ ಪದ್ಧತಿ ಮತ್ತು ಸುಧಾರಣೆ ಯೋಜನೆಯ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಡಿಯಲ್ಲಿ ವಿಶ್ವ ಬ್ಯಾಂಕ್ ಮಾರ್ಗಸೂಚಿಯನ್ವಯ ಡಾ॥ ನಂಜುಂಡಪ್ಪ ವರದಿಯನ್ವಯ ರಾಜ್ಯದ ಹಿಂದುಳಿದ ತಾಲ್ಲೂಕಗಳಲ್ಲಿ ಸಂಚಾರಿ ಆರೋಗ್ಯ ಘಟಕಗಳನ್ನು ನಿರ್ವಹಿಸಲಾಗುತ್ತಿದೆ.

ಆರ್ಥಿಕವಾಗಿ ಹಿಂದುಳಿದ ಮತ್ತು ಬುಡಕಟ್ಟು ಪ್ರದೇಶಗಳಲ್ಲಿ ಆರೋಗ್ಯ ಸೇವೆ ಮತ್ತು ಅಗತ್ಯ ಚಿಕಿತ್ಸಾ ಸೌಲಭ್ಯಗಳು ಲಭ್ಯವಿಲ್ಲದ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಸೇವೆ ನೀಡಲು 5 ಹಂತಗಳಲ್ಲಿ ಸಂಚಾರಿ ಆರೋಗ್ಯ ಘಟಕಗಳನ್ನು 2008 ರಿಂದ ನಿರ್ವಹಿಸಲಾಗುತ್ತಿದೆ.

ಮೊದಲ ಹಂತದಲ್ಲಿ 5, ಎರಡನೇ ಹಂತದಲ್ಲಿ 25, ಮೂರನೇ ಹಂತದಲ್ಲಿ 30, ನಾಲ್ಕನೇ ಹಂತದಲ್ಲಿ 35 ಹಾಗೂ ಐದನೇ ಹಂತದಲ್ಲಿ 30 ಘಟಕಗಳನ್ನು ಪ್ರಾರಂಭಿಸಲಾಯಿತು. ಪ್ರಾರಂಭಿಸಲಾದ ಒಟ್ಟು 125 ಘಟಕಗಳ ಪೈಕಿ ಹಾಲಿ 107 ಘಟಕಗಳು ಕಾರ್ಯನಿರ್ವಹಿಸುತ್ತಿದೆ. ಈ

ಸಂಚಾರಿ ಆರೋಗ್ಯ ಘಟಕಗಳನ್ನು ಸರ್ಕಾರದೊಂದಿಗೆ ಒಡಂಬಡಿಕೆಗೆ ಒಳಪಡುವ ಸರ್ಕಾರೇತರ ಸಂಸ್ಥೆಗಳಿಗೆ ವಹಿಸಿಕೊಡಲಾಗಿದೆ.

ಈ ಕಾರ್ಯಕ್ರಮವನ್ನು ವಿಶ್ವ ಬ್ಯಾಂಕ್ ಅನುದಾನದಿಂದ ನಿರ್ವಹಿಸಲಾಗುತ್ತಿದ್ದು, ವಿಶ್ವ ಬ್ಯಾಂಕ್ ಮಾರ್ಗಸೂಚಿಯಂತೆ ದಿನಾಂಕ: 30.6.2014 ರವರೆಗೆ ಮುಂದುವರೆಸಲಾಗಿದೆ. ದಿನಾಂಕ: 26.06.2013 ರಂದು ನಡೆದ 38ನೇ ಕಾರ್ಯಕ್ರಮ ಚಾಲನ ಸಮಿತಿಯ ಸಭೆಯ ತೀರ್ಮಾನದಂತೆ ರಾಜ್ಯದ ಜನ ಸಮುದಾಯಕ್ಕೆ ಗುಣಾತ್ಮಕ ಆರೋಗ್ಯ ಸೇವೆಯನ್ನು ನೀಡಲು ಸಲುವಾಗಿ, ವಿಶ್ವ ಬ್ಯಾಂಕ್ ಮಾರ್ಗಸೂಚಿಯನ್ವಯ 35 ಸಂಚಾರಿ ಆರೋಗ್ಯ ಘಟಕಗಳಿಗೆ ಕಂದಾಯವಾರು ವಿಭಾಗಳಿಗೆ ಹೊಸದಾಗಿ Non-Consultancy Services ಮೂಲಕ ಟೆಂಡರ್ ಅನ್ನು ಆಹ್ವಾನಿಸಲು e-procurement ನಲ್ಲಿ ಕ್ರಮ ಜರುಗಿಸಲಾಗುತ್ತಿದೆ. ಹಾಗೂ ಪ್ರಕರಣವು ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದು ಇತ್ಯರ್ಥವಾಗದಿರುವುದರಿಂದ ಯಾವುದೇ ಅಂತಿಮ ತೀರ್ಮಾನ ಕೈಗೊಳ್ಳಲಾಗಿರುವುದಿಲ್ಲ.

ಅನುಬಂಧ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ಸಾಮಾನ್ಯ ವೈದ್ಯಾಧಿಕಾರಿ, ತಜ್ಞ ವೈದ್ಯರು, ಮತ್ತು ಇತರೆ ಸಿಬ್ಬಂದಿ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರಗಳು:

- ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ.) ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವ ಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಅನ್ವಯಿಸುವಂತೆ ಮಾಸಿಕ

` 80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ` 60,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

- ಜೆ.ಹೆಚ್.ಎಸ್.ಡಿ.ಆರ್.ಪಿ. ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ` 65,000 ಹಾಗೂ ` 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ` 5,000 ದಿಂದ ` 10,000 ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ` 8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ` 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಅದರೂ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

- ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

- ಭಾರತ ಸಂವಿಧಾನ ಅನುಚ್ಛೇದ 371 ಜೆ ರೀತ್ಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಮಟ್ಟದ ಸ್ಥಳೀಯ ವೃಂದ ಕುರಿತಂತೆ ಅಧಿಸೂಚನೆ ಹೊರಡಿಸಲಾಗಿದೆ. ಈ ಹುದ್ದೆಗಳಿಗೆ ಸಂಬಂಧ ಪಟ್ಟ ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ಇಚ್ಛೆ ಪತ್ರವನ್ನು ಪಡೆದು, ತದನಂತರ ಖಾಲಿ ಹುದ್ದೆಗಳನ್ನು ಗುರುತಿಸಿ, ಅವುಗಳನ್ನು ಸ್ಥಳೀಯ ವೃಂದ ಮತ್ತು ಮೀಸಲಾತಿ ನಿಯಮಗಳನ್ವಯ ವರ್ಗೀಕರಿಸಿ, ತದನಂತರ ತಜ್ಞ ವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ದಂತ ಆರೋಗ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿ ವರ್ಗಗಳ ಹಲವು ವೃಂದಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹಾಗೂ ಇತರೆ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಮತ್ತು ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲು ಉದ್ದೇಶಿಸಲಾಗಿದೆ.

ಬಸವೇಶ್ವರ ನಗರದ ಶಾರದಾ ಕಾಲೋನಿ ಬಸ್ ನಿಲ್ದಾಣ

46(28) ಶ್ರೀ ಸುರೇಶ್ ಕುಮಾರ್ ಎಸ್.

ಅ) ರಾಜಾಜಿನಗರದ ವಿಧಾನಸಭಾ ಕ್ಷೇತ್ರದ ಬಸವೇಶ್ವರನಗರದ ಶಾರದಾ ಕಾಲೋನಿ ಬಸ್ ನಿಲ್ದಾಣದ ವಿಸ್ತೀರ್ಣವೆಷ್ಟು;

ಆ) ಹಾಗಾದರೆ ಈ ಬಸ್ ನಿಲ್ದಾಣದಿಂದ ಪ್ರತಿನಿತ್ಯ ಬೆಂಗಳೂರಿನಿಂದ ಹೊರ ಪ್ರದೇಶಗಳಿಗೆ ಪ್ರಯಾಣಿಕರನ್ನು ಯಾವ ಯಾವ ಊರುಗಳಿಗೆ ಕರೆದೊಯ್ಯಲಾಗುತ್ತಿದೆ.

ಇ) ಹಾಗಿದ್ದಲ್ಲಿ ಈ ಬಸ್ ನಿಲ್ದಾಣವನ್ನು ಆಧುನಿಕರಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು)